# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 18.09.2024ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಮಂಗಳೂರು ವಿಶ್ವವಿದ್ಯಾನಿಯದ** ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ **ನಡೆದ ಶೈಕ್ಷಣಿಕ ಮಂಡಳಿಯ 2024-25**ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ (ಆನ್ ಲೈನ್) **ನಡವಳಿಗಳು.**

ಉಪಸ್ಥಿತರು:

ಅನುಪಸ್ಥಿತರು:

## ಪ್ರಾರಂಭಿಕ

ಪ್ರಾರಂಭದಲ್ಲಿ ಪ್ರಭಾರ ಕುಲಸಚಿವರು ಮಾನ್ಯ ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳನ್ನು, ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳನ್ನು, ಎಲ್ಲಾ ನಿಕಾಯದ ಡೀನರುಗಳನ್ನು, ಶೈಕ್ಷಣಿಕ ಮಂಡಳಿಯ ಸದಸ್ಯರುಗಳನ್ನು ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿ, ಸಭಾಧ್ಯಕ್ಷರಲ್ಲಿ ಸಭೆಯನ್ನು ಮುಂದುವರಿಸುವಂತೆ ಕೋರಿದರು.

ಮಾನ್ಯ ಕುಲಪತಿಯವರು ಮತ್ತೊಮ್ಮೆ ಸಭೆಯಲ್ಲಿ ನೆರೆದ ಎಲ್ಲಾ ಸದಸ್ಯರುಗಳನ್ನು ಆನ್ ಲೈನ್ ಸಭೆಗೆ ಸ್ವಾಗತಿಸಿದರು.

**ಪ್ರಾಸ್ತಾವಿಕ:**

ಮಾನ್ಯ ಕುಲಪತಿಯವರು ಶೈಕ್ಷಣಿಕ ಮಂಡಳಿಯ ಸಭೆಯನ್ನು ಆನ್ ಲೈನ್ ಮೂಲಕ ನಡೆಸಿರುವ ಔಚಿತ್ಯದ ಬಗ್ಗೆ ವಿವರಣೆಯನ್ನು ನೀಡಿದರು. ಕೆಲವು ವೃಂದದ ಶೈಕ್ಷಕೇತರ ಉದ್ಯೋಗಿಗಳು ಅನೇಕ ವರ್ಷಗಳಿಂದ ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸುತ್ತಿದ್ದರೂ ಸಹ ತಮ್ಮ ಸೇವಾ ಅವಧಿಯಲ್ಲಿ ಒಂದೂ ಪದೋನ್ನತಿಯನ್ನು ಪಡೆಯಲು ಸಾಧ್ಯವಾಗದಿರುವ ಹಿನ್ನಲೆಯಲ್ಲಿ ಅವರ ಪದೋನ್ನತಿಗೆ ಅವಕಾಶ ಕಲ್ಪಿಸಿ ಪರಿನಿಯಮಗಳನ್ನು ರಚಿಸಿ ಈ ಶೈಕ್ಷಣಿಕ ಮಂಡಳಿ ಸಭೆಯ ಅನುಮೋದನೆಗೆ ಮಂಡಿಸಲಾಗಿದೆ ಎಂದರು.

- **ಸ್ವಾಗತ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(Vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಡಾ. ಸತೀಶ್ ಕೆ., ಪ್ರಾಂಶುಪಾಲರು,

ಡಾ.ಎಂ.ವಿ. ಶೆಟ್ಟಿ ಕಾಲೇಜ್ ಆಫ್ ಸ್ಪೀಚ್ & ಹಿಯರಿಂಗ್, ವಿದ್ಯಾನಗರ, ಪಂಜಿಮೊಗರು, ಮಂಗಳೂರು ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಿದರು.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ವಾಣಿಜ್ಯ ನಿಕಾಯದ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸಭೆಗೆ ಹಾಜರಾಗಿರುವ ಪ್ರೊ. ಪುಟ್ಟಣ್ಣ ಕೆ., ಪ್ರಾಧ್ಯಾಪಕರು, ವ್ಯವಹಾರ ಆಡಳಿತ ವಿಭಾಗ ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಿದರು.

- **ಕೃತಜ್ಞತೆ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ವಾಣಿಜ್ಯ ನಿಕಾಯ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿದ್ದ ಸಭೆಗಳಿಗೆ ಹಾಜರಾಗುತ್ತಿದ್ದ **ಪ್ರೊ. ಈಶ್ವರ್ ಪಿ.** ಇವರ ಡೀನ್ ಅವಧಿ ಕೊನೆಗೊಂಡಿರುವುದರಿಂದ ಡೀನ್ ಹುದ್ದೆಯಿಂದ ಮುಕ್ತಗೊಳಿಸಲಾಗಿರುತ್ತದೆ.

ಸದರಿಯವರು ಡೀನ್ ಹುದ್ದೆಯಲ್ಲಿದ್ದ ಅವಧಿಯಲ್ಲಿ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಹಾಜರಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಸೂಚನೆಗಳನ್ನು ನೀಡಿರುವ ಹಿನ್ನಲೆಯಲ್ಲಿ ಪ್ರೊ. ಈಶ್ವರ್ ಪಿ . ರವರಿಗೆ ಶೈಕ್ಷಣಿಕ ಮಂಡಳಿಯ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು. .

## I. ನಡವಳಿಗಳ ದೃಢೀಕರಣ:

ದಿನಾಂಕ 06.08.2024 ರಂದು ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಡವಳಿಯ ದೃಢೀಕರಣ.

-ದೃಢೀಕರಿಸಲಾಯಿತು.

## II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ಪರಿನಿಯಮ/ವಿನಿಮಯಗಳು.

-ಯಾವುದೂ ಇರುವುದಿಲ್ಲ.

**III.** ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು.

**ಈ ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಶೈ.ಮ.ಸಾ.ಸ.2:1 (2024-25)**

**ವಿಷಯ:** ಮುಖ್ಯ ಛಾಯಾಗ್ರಾಹಕ ಹುದ್ದೆಯ ಸೃಜನೆಗೆ ಸಂಬಂಧಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಬ್ಬಂದಿ:ಶೈ.ಮ.ಸಾ.ಸ.2:2 (2024-25)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮಂಜೂರಾಗಿರುವ ಪ್ರಯೋಗಾಲಯ ಸಹಾಯಕ ಹುದ್ದೆಗಳಿಂದ ಶೇಕಡ 30 ಹುದ್ದೆಗಳನ್ನು ಹಿರಿಯ ಪ್ರಯೋಗಾಲಯ ಸಹಾಯಕ ಹುದ್ದೆಯನ್ನಾಗಿ ಪರಿವರ್ತಿಸುವ ಬಗ್ಗೆ.

**ನಿರ್ಣಯ:** ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ ಶೈಕ್ಷಣಿಕ ಮಂಡಳಿಯ ಸಭೆಗೆ ಹಾಜರಾಗಲು ನಿಯುಕ್ತಿಗೊಂಡಿರುವ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರು, ಈ ವಿಷಯದ ಕುರಿತು ನಡೆದ ಚರ್ಚೆಯಲ್ಲಿ, ಶೇಕಡ 30 ಹುದ್ದೆಗಳನ್ನು ಮಾತ್ರ ಹಿರಿಯ ಪ್ರಯೋಗಾಲಯ ಸಹಾಯಕ ಹುದ್ದೆಗಳನ್ನಾಗಿ ಪರಿವರ್ತಿಸುವುದರಿಂದ ಕೆಲವು ಉದ್ಯೋಗಿಗಳಿಗೆ ಮಾತ್ರ ಅನುಕೂಲವಾಗಲಿದ್ದು, ತದನಂತರದಲ್ಲಿ ಅರ್ಹತೆ ಇರುವ ನೌಕರರಿಗೆ ಬಡ್ತಿ ಅವಕಾಶ ಲಭ್ಯವಾಗದೇ ಇರುವುದರಿಂದ ಹಾಗೂ ಬಡ್ತಿ ನಂತರವೂ ಸದರಿ ನೌಕರರ Nature of Work ನಲ್ಲಿ ಯಾವೂದೇ ಬದಲಾವಣೆ ಇಲ್ಲದೇ ಇರುವುದರಿಂದ ಇದನ್ನು ಬಡ್ತಿ ಎಂದು ಕರೆಯುವುದು ಸೂಕ್ತವಾಗುವುದಿಲ್ಲ. ಆದುದರಿಂದ ಎಲ್ಲಾ ನೌಕರರಿಗೂ ಸಮಾನಾಂತರ ಉನ್ನತ ವೇತನ ಶ್ರೇಣಿಯ ಅವಕಾಶ ಕಲ್ಪಿಸಲು Time Bound Placement ನೀಡುವುದು ಸಮಂಜಸವಾಗಿರುತ್ತದೆ. ಸದರಿ Statute ನಲ್ಲಿ ಬಡ್ತಿ ಬದಲು Time Bound Placement ಎಂದು ಬದಲಾಯಿಸಿ ಎಲ್ಲಾ ನೌಕರರಿಗೆ ಸಮಾನಂತರ ಅವಕಾಶಗಳು ದೊರೆಯುವಂತೆ ಮಾಡುವುದು ಸೂಕ್ತವಾಗಿರುತ್ತದೆ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿರುತ್ತಾರೆ.

ಈ ಬಗ್ಗೆ ಕೂಲಂಕೂಷವಾಗಿ ಚರ್ಚಿಸಿ, ವಿಶ್ವವಿದ್ಯಾನಿಲಯದಲ್ಲಿ ಯಾವೂದೇ ಪದೋನ್ನತಿ ಇಲ್ಲದೆ ಒಂದೇ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ 10 ವರ್ಷ, 15 ವರ್ಷ, 20 ವರ್ಷ ಹಾಗೂ 25 ವರ್ಷಗಳ ಸೇವೆಗೆ Time Bound Placement ಗೆ ಈಗಾಗಲೇ ಅವಕಾಶವಿರುವುದರಿಂದ ಶೈಕ್ಷಣಿಕ ಮಂಡಳಿಯ ಸಭೆಗೆ ಮಂಡಿಸಿರುವ ಈ ಪರಿನಿಯಮದಲ್ಲಿ ಯಾವುದೇ ತಿದ್ದುಪಡಿ ಇಲ್ಲದೆ ಅನುಮೋದಿಸಲು ನಿರ್ಣಯಿಸಲಾಯಿತು.

**ಇತರೆ ವಿಷಯಗಳು:**

ಮಂಗಳೂರು ವಿಶ್ವವಿದ್ಯಾನಿಲಯದ 45ನೇ ವಾರ್ಷಿಕ ಸಂಸ್ಥಾಪನಾ ದಿನಾಚರಣೆಯನ್ನು ದಿನಾಂಕ 25.09.2024 ರಂದು ಮಂಗಳಗಂಗೋತ್ರಿಯಲ್ಲಿ ಹಮ್ಮಿಕೊಳ್ಳಲು ನಿರ್ಣಯಿಸಲಾಗಿದ್ದು, ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕದ ಮಾಜಿ ಲೋಕಾಯುಕ್ತರಾದ ಜಸ್ಟೀಸ್ ಸಂತೋಷ್ ಹೆಗ್ಡೆಯವರು ಭಾಗವಹಿಸಿ ಸಂಸ್ಥಾಪನಾ ದಿನಾಚರಣೆ ಉಪನ್ಯಾಸವನ್ನು ನೀಡಲಿದ್ದಾರೆ. ಶೈಕ್ಷಣಿಕ ಮಂಡಳಿಯ ಎಲ್ಲಾ ಸದಸ್ಯರೂ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮಾನ್ಯ ಕುಲಪತಿಗಳು ವಿನಂತಿಸಿ ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/-
**ಕುಲಸಚಿವರು**

ಸಹಿ/-
**ಕುಲಪತಿಗಳು.**